ದಿನಾಂಕ : DATE 28-10-2
ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ
ಇಲಾಖೆ / ವಿಷಯ : DEPARTMENT / SUBJECT:

# ಮೇಲ್ಮನೆ: ಇಂದು 4 ಕ್ಷೇತ್ರಗಳಿಗೆ ವೋಟಿಂಗ್

## 2 ಪದವೀಧರ, 2 ಶಿಕ್ಷಕರ ಕ್ಷೇತ್ರಗಳಿಗೆ ಚುನಾವಣೆ, ನ.2ಕ್ಕೆ ಫಲಿತಾಂಶ

**ಬೆಂಗಳೂರು:** ವಿಧಾನಪರಿಷತ್‌ನ ಎರಡು ಪದವೀಧರ ಮತ್ತು ಎರಡು ಶಿಕ್ಷಕರ ಕ್ಷೇತ್ರಗಳಿಗೆ ಅ.28ರ ಬುಧವಾರ ಬೆಳಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಮತದಾನ ನಡೆಯಲಿದೆ. 4 ಕ್ಷೇತ್ರಗಳಲ್ಲಿ ಒಟ್ಟಾರೆ 549 ಮತಕೇಂದ್ರಗಳನ್ನು ಸ್ಥಾಪನೆ ಮಾಡಲಾಗಿದೆ. ಚುನಾವಣಾ ಕಣದಲ್ಲಿ ಅಂತಿಮವಾಗಿ 40 ಅಭ್ಯರ್ಥಿಗಳು ಸೆಣಸಲಿದ್ದಾರೆ. ವಿಧಾನಪರಿಷತ್‌ನ ನಾಲ್ಕು ಕ್ಷೇತ್ರಗಳಿಗೆ ನ.2ರಂದು ಮತ ಎಣಿಕೆ ನಡೆಯಲಿದೆ. ಚಿತ್ರದುರ್ಗ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ದಾವಣಗೆರೆ, ಧಾರವಾಡ, ಹಾವೇರಿ, ಗದಗ, ಉತ್ತರ ಕನ್ನಡ, ಬೀದರ್, ಕಲಬುರಗಿ, ಯಾದಗಿರಿ, ರಾಯ ಚೂರು, ಕೊಪ್ಪಳ, ಬಳ್ಳಾರಿ, ಬೆಂಗಳೂರು, ಬೆಂ.ಗ್ರಾಮಾಂತರ, ರಾಮನಗರದಲ್ಲಿ ಮತದಾನ ನಡೆಯಲಿದೆ. ವಿವರ ↘ 7

# ಇಂದು ಪರಿಷತ್‌ನ 4 ಕ್ಷೇತ್ರಗಳಿಗೆ ಚುನಾವಣೆ

## 2 ಪದವೀಧರ, 2 ಶಿಕ್ಷಕರ ಕ್ಷೇತ್ರಗಳು । 549 ಮತಕೇಂದ್ರ । 40 ಅಭ್ಯರ್ಥಿಗಳು ಕಣದಲ್ಲಿ । ಕಾಂಗ್ರೆಸ್, ಜೆಡಿಎಸ್, ಬಿಜೆಪಿಗೆ ಪ್ರತಿಷ್ಠೆ ಪ್ರಶ್ನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿಧಾನಪರಿಷತ್‌ನ ಎರಡು ಪದವೀಧರ ಮತ್ತು ಎರಡು ಶಿಕ್ಷಕರ ಕ್ಷೇತ್ರಗಳಿಗೆ ಶಾಂತಿಯುತವಾಗಿ ಮತದಾನ ನಡೆಸಲು ಚುನಾವಣಾ ಆಯೋಗವು ಸಿದ್ಧತೆ ಮಾಡಿಕೊಂಡಿದ್ದು, ಬುಧವಾರ ಬೆಳಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆವರೆಗೆ ಮತದಾನ ನಡೆಯಲಿದೆ.



ನಾಲ್ಕು ಕ್ಷೇತ್ರಗಳಲ್ಲಿ ಒಟ್ಟಾರೆ 549 ಮತಕೇಂದ್ರಗಳನ್ನು ಸ್ಥಾಪನೆ ಮಾಡಲಾಗಿದೆ. ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ 146 ಮತ ಕೇಂದ್ರಗಳು, ಆಗ್ನೇಯ ಪದವೀಧರ ಕ್ಷೇತ್ರದಲ್ಲಿ 187 ಮತಕೇಂದ್ರಗಳು, ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ 69 ಮತಕೇಂದ್ರಗಳು ಮತ್ತು ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ 147 ಮತಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಚುನಾವಣಾ ಕಣದಲ್ಲಿ ಅಂತಿಮವಾಗಿ 40 ಅಭ್ಯರ್ಥಿಗಳು ಸೆಣಸಲಿದ್ದಾರೆ. ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ 9 ಅಭ್ಯರ್ಥಿಗಳು, ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ 5 ಅಭ್ಯರ್ಥಿಗಳು, ಆಗ್ನೇಯ ಪದವೀಧರ ಕ್ಷೇತ್ರದಲ್ಲಿ 15 ಅಭ್ಯರ್ಥಿಗಳು ಮತ್ತು ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ 11 ಅಭ್ಯರ್ಥಿಗಳು ಅಖಾಡದಲ್ಲಿದ್ದಾರೆ. ನಾಲ್ಕು ಕ್ಷೇತ್ರದಲ್ಲಿ ಆಡಳಿತಾರೂಢ ಬಿಜೆಪಿ, ಪ್ರತಿಪಕ್ಷ ಕಾಂಗ್ರೆಸ್ ಮತ್ತು ಜೆಡಿಎಸ್‌ನ ತಲಾ 4 ಅಭ್ಯರ್ಥಿಗಳು, ನೋಂದಾಯಿತ ಪಕ್ಷದಿಂದ 6 ಅಭ್ಯರ್ಥಿಗಳು ಮತ್ತು 22 ಪಕ್ಷೇತರ ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ.

ಎಲ್ಲಿ ಎಷ್ಟು ಮತದಾರರು?: ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಒಟ್ಟು 75781, ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಒಟ್ಟು 1.09 ಲಕ್ಷ, ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಒಟ್ಟು 29330, ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಒಟ್ಟು 22261 ಮತದಾರರಿದ್ದಾರೆ.

**ಶಾಯಿ:** ಮತದಾನದ ದಿನದಂದು ಮತದಾರರಿಗೆ ಎಡಗೈನ ತೋರು ಬೆರಳಿಗೆ ಶಾಯಿ ಹಚ್ಚಲು ಆಯೋಗವು ಸೂಚನೆ ನೀಡಿದೆ.

### ಸಾಂದರ್ಭಿಕ ರಜೆ

ವಿಧಾನ ಪರಿಷತ್‌ನ 4 ಮತ ಕ್ಷೇತ್ರಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಶಾಲಾ ಕಾಲೇಜುಗಳು, ಅನುದಾನಿತ, ಅನುದಾನ ರಹಿತ ವಿದ್ಯಾಸಂಸ್ಥೆಗಳು, ಎಲ್ಲಾ ಶೈಕ್ಷಣಿಕ ಸಂಸ್ಥೆಗಳು, ರಾಜ್ಯ ಮತ್ತು ಕೇಂದ್ರ ಸರ್ಕಾರದ ಕಚೇರಿಗಳು, ರಾಷ್ಟ್ರೀಕೃತ ಮತ್ತು ಇತರ ಬ್ಯಾಂಕ್‌ಗಳು, ಕೇಂದ್ರ ಮತ್ತು ರಾಜ್ಯ ಸರ್ಕಾರದ ಕಾರ್ಖಾನೆಗಳು, ಕೈಗಾರಿಕೆ ಸಂಸ್ಥೆಗಳು, ಸಹಕಾರಿ ರಂಗದ ಸಂಘ-ಸಂಸ್ಥೆಗಳು ಸೇರಿದಂತೆ ಇತರೆ ಸಂಸ್ಥೆಯಲ್ಲಿ ಕಾಯಂ ಹಾಗೂ ದಿನಗೂಲಿ ಮೇಲೆ ಕೆಲಸ ನಿರ್ವಹಿಸುವ ಪದವೀಧರರು ಮತ್ತು ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಬುಧವಾರ ವಿಶೇಷ ಸಾಂದರ್ಭಿಕ ರಜೆ ಮಂಜೂರು ಮಾಡಲು ಸರ್ಕಾರ ಆದೇಶಿಸಿದೆ.

### ಕ್ಷೇತ್ರದ ವ್ಯಾಪ್ತಿಗೆ ಬರುವ ಜಿಲ್ಲೆಗಳು

- **ಆಗ್ನೇಯ ಪದವೀಧರ ಕ್ಷೇತ್ರ:** ಚಿತ್ರದುರ್ಗ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ದಾವಣಗೆರೆ( ಚನ್ನಗಿರಿ ಮತ್ತು ಹೊನ್ನಾಳಿ ತಾಲೂಕು ಹೊರತು ಪಡಿಸಿ).
- **ಪಶ್ಚಿಮ ಪದವೀಧರ ಕ್ಷೇತ್ರ:** ಧಾರವಾಡ, ಹಾವೇರಿ, ಗದಗ, ಉತ್ತರ ಕನ್ನಡ
- **ಈಶಾನ್ಯ ಶಿಕ್ಷಕರ ಕ್ಷೇತ್ರ:** ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ
- **ಬೆಂಗಳೂರು ಶಿಕ್ಷಕರ ಕ್ಷೇತ್ರ:** ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಹಾಗೂ ರಾಮನಗರ ಜಿಲ್ಲೆ

### ನ.2ರಂದು ಫಲಿತಾಂಶ

ವಿಧಾನಪರಿಷತ್‌ನ ನಾಲ್ಕು ಕ್ಷೇತ್ರಗಳಿಗೆ ನ.2ರಂದು ಮತ ಎಣಿಕೆ ನಡೆಯಲಿದೆ. ಪದವೀಧರ ಕ್ಷೇತ್ರದ ಮತ ಎಣಿಕೆಯು ಧಾರವಾಡದ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದಲ್ಲಿ ನಡೆಯಲಿದೆ. ಒಂದು ಹಾಲ್‌ನಲ್ಲಿ ಏಳು ಟೇಬಲ್ ವ್ಯವಸ್ಥೆ ಮಾಡಲಾಗಿದೆ. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತ ಎಣಿಕೆಯು ಗುಲ್ಬರ್ಗ ವಿಶ್ವವಿದ್ಯಾಲಯದ ಗಣಿತ ವಿಭಾಗದಲ್ಲಿ ನಡೆಯಲಿದ್ದು, ಒಂದು ಹಾಲ್‌ನಲ್ಲಿ ಏಳು ಟೇಬಲ್ ವ್ಯವಸ್ಥೆ ಮಾಡಲಾಗಿದೆ. ಆಗ್ನೇಯ ಪದವೀಧರ ಕ್ಷೇತ್ರ ಮತ್ತು ಬೆಂಗಳೂರು ಶಿಕ್ಷಕರ ಮತ ಕ್ಷೇತ್ರದ ಮತ ಎಣಿಕೆಯು ಸರ್ಕಾರಿ ಕಲಾ ಕಾಲೇಜಿನಲ್ಲಿ ನಡೆಯಲಿದ್ದು, ಪ್ರತ್ಯೇಕವಾಗಿ ಎರಡು ಹಾಲ್‌ನಲ್ಲಿ ತಲಾ 14 ಟೇಬಲ್‌ಗಳ ವ್ಯವಸ್ಥೆ ಮಾಡಲಾಗಿದೆ.